# ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ/01/ಇಎಸ್‌ಟಿ(9)/2018 /2298

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 27/11/2018.

## ಹಿಂಬರಹ

ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಇಡಿ 132 ವಿವಿಧ 2018 ದಿನಾಂಕ:17/11/2018 ಮತ್ತು ಅ.ಸ.ಪ ಸಂಖ್ಯೆ:ಸಿಆಸುಇ 173 ಇಆಸು 2018 ದಿನಾಂಕ:31/10/2018ರ ಪ್ರತಿಗಳನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್ ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು(ಆಡಳಿತ), ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3), ಸಾರ್ವಜನಿಕ ಸಂಪರ್ಕಾಧಿಕಾರಿ ಹಾಗೂ ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ
3. ಈ ನಿರ್ದೇಶನಾಲಯದ ಇ.ಎಸ್.ಟಿ (2)ಎ ವಿಭಾಗಕ್ಕೆ ಮಾಹಿತಿಗಾಗಿ
4. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ

ಆಡಳಿತಾಧಿಕಾರಿ

Sh-est(9) Endsmnt

13559

## ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 132 ವಿವಿಧ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:17.11.2018

ಇವರಿಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು – 560 001.

ಇವರಿಗೆ:

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-560 001.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-560 001.
3. ಆಡಳಿತಾಧಿಕಾರಿ, ಎನ್.ಸಿ.ಸಿ. ನಿರ್ದೇಶನಾಲಯ, ಕನ್ನಿಂಗ್ ಹ್ಯಾಂ ರಸ್ತೆ ಬೆಂಗಳೂರು.

ಮಾನ್ಯರೇ,

ವಿಷಯ: 2018-19ನೇ ಸಾಲಿನ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಶಿಫಾರಸ್ಸು ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇವರ ಅ.ಸ.ಪತ್ರ ಸಂಖ್ಯೆ:ಸಿಆಸುಇ 173 ಇಆಸು 2018, ದಿನಾಂಕ:31/10/2018

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಅರೆಸರ್ಕಾರಿ ಪತ್ರ ಹಾಗೂ ಅದರೊಂದಿಗಿನ ಅಡಕಗಳ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಅರೆ ಸರ್ಕಾರಿ ಪತ್ರದಲ್ಲಿ ತಿಳಿಸಿರುವಂತೆ, ಸುತ್ತೋಲೆ ಸಂಖ್ಯೆ:ಸಿ.ಆ.ಸು.ಇ 99 ಆಇಸು 2018, ದಿನಾಂಕ:08/08/2018ರನ್ವಯ ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಎರಡು ನಾಮ ನಿರ್ದೇಶನಗಳನ್ನು ಮತ್ತು ಇಲಾಖಾವಾರು ಸರ್ವೋತ್ತಮ ಸೇವಾ ಪ್ರಶಸ್ತಿಗೆ ಒಂದು ನಾಮ ನಿರ್ದೇಶನವನ್ನು ಉನ್ನತ ಶಿಕ್ಷಣ ಇಲಾಖೆಯಿಂದ ಶಿಫಾರಸ್ಸು ಮಾಡಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಕಳುಹಿಸಬೇಕಿರುವ ಹಿನ್ನೆಲೆಯಲ್ಲಿ, ಸುತ್ತೋಲೆ ಸಂಖ್ಯೆ:ಸಿ.ಆಸು.ಇ 99 ಆಇಸು 2018, ದಿನಾಂಕ:08/08/2018ರನ್ವಯ ತಮ್ಮ ಇಲಾಖೆಗೆ ಸಂಬಂಧಿಸಿದಂತೆ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಮಾಡಿ ಜರೂರು ಕಳುಹಿಸುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,
17/11/18
(ಎಂ.ಎ. ಅಹಮದ್ ಜಾನ್)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ವಿಶ್ವವಿದ್ಯಾಲಯ-2 & ಸಾಮಾನ್ಯ-2).

Cir-18021/18
05/11/18


ಡಾ: ಜಿ. ಕಲ್ಪನಾ, ಭಾ.ಆ.ಸೇ.,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
[ಆಡಳಿತ ಸುಧಾರಣೆ, ತರಬೇತಿ ಮತ್ತು ರಾವಿವೇ]

ದೂರವಾಣಿ: ಕಛೇರಿ: 22353985/22032825
ಫ್ಯಾಕ್ಸ್ : 22253739
E-mail: prsar-dpar@karnataka.gov.in
ಕರ್ನಾಟಕ ಸರ್ಕಾರ ಸಚಿವಾಲಯ
6ನೇ ಮಹಡಿ, 2ನೇ ಹಂತ
ಬಹುಮಹಡಿ ಕಟ್ಟಡ, ಬೆಂಗಳೂರು-560 001


ಅ.ಸ.ಪ.ಸಂಖ್ಯೆ: ಸಿಆಸುಇ 173 ಇಆಸು 2018 ದಿನಾಂಕ:31.10.2018

ಮಾನ್ಯರೇ,

2018-19ನೇ ಸಾಲಿನ ರಾಜ್ಯ ಮಟ್ಟದ ಹಾಗೂ ಇಲಾಖಾವಾರು ಸರ್ವೋತ್ತಮ ಸೇವಾ ಪ್ರಶಸ್ತಿಗೆ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಇವರಿಂದ ಶಿಫಾರಸ್ಸು ಮಾಡಿರುವ ನಾಮನಿರ್ದೇಶನಗಳನ್ನು ದಿನಾಂಕ:30.09.2018 ರೊಳಗಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ) ಗೆ ಕಳುಹಿಸಿಕೊಡುವಂತೆ ಸುತ್ತೋಲೆ ಸಂಖ್ಯೆ: ಸಿಆಸುಇ 99 ಇಆಸು 2018, ದಿನಾಂಕ:08.08.2018 ರಲ್ಲಿ ಕೋರಲಾಗಿದೆ (ಪ್ರತಿ ಲಗತ್ತಿಸಿದೆ). ಆದರೆ, ಇದುವರೆಗೂ ಗಣನೀಯ ಪ್ರಮಾಣದಲ್ಲಿ ಎಲ್ಲಾ ಇಲಾಖೆಗಳಿಂದ ನಾಮನಿರ್ದೇಶನಗಳು ಸ್ವೀಕೃತವಾಗಿರುವುದಿಲ್ಲ. ಕೆಲವು ನಾಮನಿರ್ದೇಶನಗಳನ್ನು ಕ್ಷೇತ್ರೀಯ ಇಲಾಖಾ ಮುಖ್ಯಸ್ಥರಿಂದ ನೇರವಾಗಿ ಸಿ.ಆ.ಸು.ಇ (ಆ.ಸು) ಗೆ ಕಳುಹಿಸಲ್ಪಟ್ಟಿದ್ದು, ಇಲಾಖಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಇವರ ಮೂಲಕ ಪ್ರಶಸ್ತಿಗೆ ಶಿಫಾರಸ್ಸು ಮಾಡಿರುವ ಬಗ್ಗೆ ಹಾಗೂ ಯಾವುದೇ ವಿಚಾರಣೆ ಬಾಕಿ ಇರುವುದಿಲ್ಲವೆಂಬ ವಿಶೇಷ ವರದಿಯೊಂದಿಗೆ ಸ್ವೀಕೃತವಾಗಿರುವುದಿಲ್ಲ.

ಆದುದರಿಂದ, ಸುತ್ತೋಲೆ ಸಂಖ್ಯೆ: ಸಿಆಸುಇ 99 ಇಆಸು 2018, ದಿನಾಂಕ:08.08.2018 ರಲ್ಲಿ ತಿಳಿಸಿರುವಂತೆ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗುವ ಸರ್ವೋತ್ತಮ ಸೇವಾ ಪ್ರಶಸ್ತಿ ಆಯ್ಕೆ ಸಮಿತಿಯು ಅತ್ಯುತ್ತಮವಾದ ನಾಮನಿರ್ದೇಶನಗಳನ್ನು ಆಯ್ಕೆ ಮಾಡಿ, ಯಾವುದೇ ವಿಚಾರಣೆ ಬಾಕಿ ಇರುವುದಿಲ್ಲವೆಂಬ ವಿಶೇಷ ವರದಿಯೊಂದಿಗೆ ಎರಡು ನಾಮನಿರ್ದೇಶನಗಳನ್ನು ರಾಜ್ಯ ಪ್ರಶಸ್ತಿಗೆ ಮತ್ತು ಒಂದು ನಾಮನಿರ್ದೇಶನವನ್ನು ಇಲಾಖಾವಾರು ಸರ್ವೋತ್ತಮ ಸೇವಾ ಪ್ರಶಸ್ತಿಗೆ ಆಯ್ಕೆ ಮಾಡಿ ಸಿ.ಆ.ಸು.ಇ. (ಆ.ಸು)ಗೆ **ದಿನಾಂಕ:06.11.2018 ರೊಳಗಾಗಿ** ಕಳುಹಿಸಿಕೊಡಬೇಕೆಂದು ಕೋರಲಾಗಿದೆ.

ಗೌರವಗಳೊಂದಿಗೆ/ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

Kalpana G

ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.

Received on 05/11/2018